RNU AIR DHARWAD

OCTOBER 26,2024

ALL INDIA RADIO- DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಮುಖ್ಯಾಂಶಗಳು:

- ಕಿತ್ತೂರು ರಾಣಿ ಚನ್ನಮ್ಮಾಜಿಯ ವಿಜಯೋತ್ಸವವನ್ನು, ಜನೋತ್ಸವವಾಗಿ ಸಂಭ್ರಮದಿಂದ ಆಚರಿಸಲಾಗಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ, ಪಾರಂಪರಿಕ ಸಂಸ್ಕೃತಿಗೆ ಒತ್ತು ನೀಡಬೇಕಿದೆ – ಜಗದೀಪ ಧನಕರ.
- ರಾಜ್ಯಾದ್ಯಂತ, ಅತಿ ವೃಷ್ಟಿಯ ಪರಿಣಾಮಗಳ ಬಗ್ಗೆ, ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ, ಇಂದು ಎಲ್ಲ ಜಿಲ್ಲಾಧಿಕಾರಿಗಳ ಸಭೆ – ಕೃ ್ಣ ಬೈರೇಗೌಡ.
- ಕಲಬುರಗಿಯಲ್ಲಿ ರಾಜ್ಯ ಬೀಜ ನಿಗಮದಿಂದ, ಗೊದಾಮು ನಿರ್ಮಾಣ – ಎನ್. ಚಲುವರಾಯಸ್ವಾಮಿ.

<><><>

ಈಗ ವಾರ್ತೆಗಳ ವಿವರ

<><><>

ಬ್ರಿಟಿಷರ ವಿರುದ್ಧದ, ಐತಿಹಾಸಿಕ ಪ್ರಥಮ ಸ್ವಾತಂತ್ರ್ಯ ಸಂಗ್ರಾಮ, ಕಿತ್ತೂರು ರಾಣಿ ಚನ್ನಮ್ಮನವರ ವಿಜಯೋತ್ಸವದ, ದ್ವಿ ಶತಮಾನೋತ್ಸವವನ್ನು, ಅತ್ಯಂತ ಸಡಗರ, ಸಂಭ್ರಮದೊಂದಿಗೆ, ಜನೋತ್ಸವವಾಗಿ ಆಚರಿಸಲಾಗಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಿತ್ತೂರಿನ ಕೋಟೆ ಆವರಣದಲ್ಲಿ, ಮೂರು ದಿನಗಳ ಕಾಲ ನಡೆದ, ಕಿತ್ತೂರು ಉತ್ಸವದ ಸಮಾರೋಪ ಸಮಾರಂಭದಲ್ಲಿ ಅವರು, ರಾಣಿ ಚನ್ನಮ್ಮನವರ ಪುತ್ಥಳಿಗೆ ಗೌರವಾರ್ಪಿಸಿ, ಮಾತನಾಡಿದರು. ವಿಶ್ವ ಮಾನವರಾಗಬೇಕು ಎಂಬ, ರಾಷ್ಟ್ರಕವಿ ಕುವೆಂಪು ಆಶಯದಂತೆ, ಅನೇಕ ಹಿರಿಯರ ತ್ಯಾಗ ಬಲಿದಾನಗಳಿಂದ, ಗಳಿಸಿದ ಸ್ವಾತಂತ್ರ್ಯವನ್ನು ಉಳಿಸಿ, ಸಮ ಸಮಾಜ ನಿರ್ಮಿಸಬೇಕಿದೆ. ಬಸವಣ್ಣನವರ ಆಶಯದಂತೆ ಜಾತಿ, ಮೌಢ್ಯ, ಕಂದಾಚಾರಗಳನ್ನು ತಿರಸ್ಕರಿಸಬೇಕಿದೆ ಎಂದು, ಮುಖ್ಯಮಂತ್ರಿ ನುಡಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಧ್ವನಿ 34 ಸೆಕೆಂದುಗಳು

<><><>

ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ ತಂಗಡಗಿ ಮಾತನಾಡಿ, ಕಿತ್ತೂರು ವಸತಿ ಶಾಲೆಗೆ 22 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದರು.

<><><>

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ, ಡಾಕ್ಟರ್ ಪುರು ೋತ್ತಮ ಬಿಳಿಮಲೆ ಮಾತನಾಡಿ, ಬ್ರಿಟಿ ’ರ ವಿರುದ್ಧ ಖಡ್ಗ ಎತ್ತಿದ, ಮೊದಲ ಸ್ವಾಭಿಮಾನಿ ರಾಣಿ ಕಿತ್ತೂರು ಚನ್ನಮ್ಮನವರು ಎಂಬುದು, ನಾಡಿಗೆ ಅಭಿಮಾನದ ಸಂಗತಿ ಎಂದರು.

<><><>

ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಸ್ವಾಮೀಜಿಗಳು ಸಾನ್ನಿಧ್ಯ ವಹಿಸಿದ್ದರು.

<><><>

ಮೌಲ್ಯವರ್ಧಿತ ಶಿಕ್ಷಣ, ದೇಶದ ಪ್ರಗತಿಯಲ್ಲಿ, ಮಹತ್ವದ ಕೊಡುಗೆ ನೀಡುತ್ತದೆ. ಯುವಜನತೆ ದೇಶದ ಶಕ್ತಿ. ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ, ಪಾರಂಪರಿಕ ಸಂಸ್ಕೃತಿಗೆ ಒತ್ತು ನೀಡಬೇಕಿದೆ ಎಂದು, ಉಪ ರಾಷ್ಟ್ರಪತಿ ಜಗದೀಪ ಧನಕರ ಹೇಳಿದ್ದಾರೆ. ಮಂಡ್ಯದ ಆದಿಚುಂಚನಗಿರಿ ವಿಶ್ವವಿದ್ಯಾಲಯದ ಕಾರ್ಯಕ್ರಮದಲ್ಲಿ, ಉಪ ರಾಷ್ಟ್ರಪತಿಯವರು ಪಾಲ್ಗೊಂಡು, ಸಂವಾದ ನಡೆಸಿದರು. ಯುವಜನತೆಯ ವ್ಯಕ್ತಿತ್ವ ರೂಪಿಸುವ ಮೂಲಕ, ರಾಷ್ಟ್ರವನ್ನು ಕಟ್ಟುವ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆಗಳ ಪಾತ್ರ, ಮಹತ್ವದ್ದಾಗಿದೆ ಎಂದು, ಅವರು ತಿಳಿಸಿದರು.

<><><>

ಆದಿಚುಂಚನಗಿರಿ ಶ್ರೀ ಮಠದ ಆವರಣದಲ್ಲಿರುವ, ಶ್ರೀ ಕಾಲ ಭೈರವೇಶ್ವರ ದರ್ಶನ ಪಡೆದರು.

<><><>

ಇಂದು, ಉಪ ರಾಷ್ಟ್ರಪತಿ ಅವರು, ಬೆಂಗಳೂರಿನಲ್ಲಿ ಆಯೋಜಿತ, ಶ್ರೀ ಭಾರತಿ ತೀರ್ಥ ಸ್ವಾಮೀಜಿ ಅವರ, ಸನ್ಯಾಸ ಸ್ವೀಕಾರದ ಸುವರ್ಣ ಮಹೋತ್ಸವದ ಅಂಗವಾಗಿ, ನಮಃ ಶಿವಾಯ ಪಾರಾಯಣ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

<><><>

ಈ ಸಮಾರಂಭದಲ್ಲಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ ಜೋಶಿ, ಕೇಂದ್ರದ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಪಾಲ್ಗೊಳ್ಳಲಿದ್ದಾರೆ.

<><><>

ಧಾರವಾಡ ಕೃಷಿ ವಿಶ್ವವಿದ್ಯಾಲಯದ, ಸಮುದಾಯ ವಿಜ್ಞಾನ ಮಹಾವಿದ್ಯಾಲಯ, ಸುವರ್ಣ ಮಹೋತ್ಸವ ಸಂಭ್ರಮದಲ್ಲಿದ್ದು, ಇಂದು ಮತ್ತು ನಾಳೆ ವಿಶೇಷ ಕಾರ್ಯಕ್ರಮಗಳು ಆಯೋಜನೆಗೊಂಡಿವೆ. ಇಂದು ಬೆಳಗ್ಗೆ 10.30ಕ್ಕೆ, ಕೃಷಿ ವಿಶ್ವವಿದ್ಯಾಲಯದ ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ, ಉದ್ಘಾಟನಾ ಕಾರ್ಯಕ್ರಮ ಜರುಗಲಿದೆ. ಸುವರ್ಣ ಮಹೋತ್ಸವದ ಸ್ಮಾರಕ ಅನಾವರಣ, ಸ್ಮರಣ ಸಂಚಿಕೆ ಬಿಡುಗಡೆ ಮತ್ತು ಮಹಾವಿದ್ಯಾಲಯದಿಂದ ವಸ್ತು ಪ್ರದರ್ಶನ ಏರ್ಪಡಿಸಲಾಗಿದೆ.

<><><>

ನಾಳೆ ವಿಶೇಷ ಕಾರ್ಯಾಗಾರದಲ್ಲಿ, ತಜ್ಞರಿಂದ ವಿಶೇಷ ಉಪನ್ಯಾಸಗಳನ್ನು ಆಯೋಜಿಸಲಾಗಿದೆ ಎಂದು, ಕೃಷಿ ವಿಶ್ವವಿದ್ಯಾಲಯದ ಉಪ ಕುಲಪತಿ ಡಾಕ್ಟರ್ ಪಿ.ಎಲ್. ಪಾಟೀಲ, ತಿಳಿಸಿದ್ದಾರೆ.

<><><>

ಹಾವೇರಿ ಜಿಲ್ಲೆ ಶಿಗ್ಗಾಂವ ಕ್ಷೇತ್ರದ ಉಪ ಚುನಾವಣೆಯಲ್ಲಿ, ಶೇಕಡ 100ರಷ್ಟು ಮತದಾನದ ಗುರಿ ಹಾಕಿಕೊಳ್ಳುವಂತೆ ಹಾಗೂ ಪರಿಣಾಮಕಾರಿಯಾಗಿ ಮತದಾರ ಜಾಗ್ರತಿ ಕೈಗೊಳ್ಳುವಂತೆ, ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ ಸೂಚಿಸಿದ್ದಾರೆ. ಹಾವೇರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಶಿಗ್ಗಾಂವ ಕ್ಷೇತ್ರದ ಉಪ ಚುನಾವಣೆ ಪ್ರಯುಕ್ತ, ಸ್ವೀಪ್ ಚಟುವಟಿಕೆಗಳ, ಅನುಷ್ಠಾನದ ಕುರಿತು ಸಭೆ ನಡೆಸಿದರು.

<><><>

ಹಾವೇರಿ ಜಿಲ್ಲೆ ಶಿಗ್ಗಾಂವ ಕ್ಷೇತ್ರದ ಉಪ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ, ಭರತ್ ಬಸವರಾಜ ಬೊಮ್ಮಾಯಿ, ಕಾಂಗ್ರೆಸ್ ನಿಂದ ಯಾಸಿರ್ ಖಾನ್ ಪಠಾಣ ಬೃಹತ್ ರೋಡ್ ಶೋ ಮೂಲಕ ಆಗಮಿಸಿ, ನಾಮಪತ್ರ ಸಲ್ಲಿಸಿದರು.

<><><>

ಬಳ್ಳಾರಿ ಜಿಲ್ಲೆ, ಸಂಡೂರು ಉಪ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಬಂಗಾರು ಹನುಮಂತ ನಾಮಪತ್ರ ಸಲ್ಲಿಸಿದ್ದಾರೆ. ಬಿಜೆಪಿ, ಕಾಂಗ್ರೆಸ್ ಸೇರಿದಂತೆ ಒಟ್ಟು 7 ಜನ ಅಭ್ಯರ್ಥಿಗಳು, 13 ನಾಮಪತ್ರಗಳನ್ನು ಸಲ್ಲಿಸಿದ್ದಾರೆ ಎಂದು, ಸಹಾಯಕ ಚುನಾವಣಾಧಿಕಾರಿ, ರಾಜೇಶ್ ತಿಳಿಸಿದ್ದಾರೆ.

<><><>

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಗೆ, ಎನ್.ಡಿ.ಎ. ಅಭ್ಯರ್ಥಿಯಾಗಿ, ನಿಖಿಲ್ ಕುಮಾರಸ್ವಾಮಿ ನಾಮಪತ್ರ ಸಲ್ಲಿಸಿದರು. ಕೇಂದ್ರದ ಭಾರೀ ಕೈಗಾರಿಕೆಗಳು ಮತ್ತು ಉಕ್ಕಿನ ಸಚಿವ ಎಚ್. ಡಿ. ಕುಮಾರಸ್ವಾಮಿ ಪಾಲ್ಗೊಂಡರು.

<><><>

ಈಗ ಪ್ರಕಟಣೆ..
ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು

<><><>

(32 ಸೆಕೆಂದುಗಳು)

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಧಾರವಾಡದ ಕರ್ನಾಟಕ ಬಾಲವಿಕಾಸ ಅಕಾದೆಮಿ, ಬೆಂಗಳೂರಿನ ಸಮಗ್ರ ಮಕ್ಕಳ ರಕ್ಷಣಾ ನಿರ್ದೇಶನಾಲಯದ ಸಹಯೋಗದಲ್ಲಿ ಆಯೋಜಿಸಿದ್ದ, ಒಟ್ಟು ಮೂರು ಕಥಾ ಕಮ್ಮಟಗಳಲ್ಲಿ, 136 ಜನ ಮಕ್ಕಳು ಬರೆದ, ಕಥಾ ಗುಚ್ಛವನ್ನು ಅಕಾದೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಬಿಡುಗಡೆ ಗೊಳಿಸಿದರು. ರಾಜ್ಯದ ಬಾಲಮಂದಿರದ ಮಕ್ಕಳಿಗೆ ಆಯೋಜಿಸಲಾಗಿದ್ದ, ರಾಜ್ಯ ಮಟ್ಟದ ಮಕ್ಕಳ ಕಥಾ ಕಮ್ಮಟದ ಸಮಾರೋಪ ಸಮಾರಂಭ, ಧಾರವಾಡ ಸಮೀಪದ ಹಳ್ಳಿಗೇರಿಯ, ಪರಿಸರ ಶಿಕ್ಷಣ ಪಾಠಶಾಲೆ, ನೇಚರ್ ಫಸ್ಟ್ ಇಕೋ ವಿಲೇಜ್ ನಲ್ಲಿ ಜರುಗಿತು. ಅಕಾದೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಕಥಾ ಕಮ್ಮಟದ ಕುರಿತು, ಪ್ರದೇಶ ಸಮಾಚಾರಕ್ಕಾಗಿ, ಮಾಹಿತಿ ನೀಡಿದ್ದಾರೆ.

<><><>

ಅಕಾದೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಧ್ವನಿ 45 ಸೆಕೆಂದುಗಳು

<><><>

ಅತಿ ವೃಷ್ಟಿಯ ರಾಜ್ಯಾದ್ಯಂತ ಪರಿಣಾಮಗಳ ಬಗ್ಗೆ, ಇಂದು ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ, ಎಲ್ಲ 31 ಜಿಲ್ಲಾಧಿಕಾರಿಗಳ ಸಭೆ ನಡೆಯಲಿದೆ. ಜಂಟಿ ಸಮೀಕ್ಷಾ ವರದಿಗಳ ಪರಿಶೀಲನೆ ಬಳಿಕ, ಮುಂಬರುವ 15 ದಿನಗಳಲ್ಲಿ, ರೈತರಿಗೆ ಪರಿಹಾರ ನೀಡಲಾಗುವುದು ಎಂದು, ಕಂದಾಯ ಖಾತೆ ಸಚಿವ ಕೃ ್ಣ ಬೈರೇಗೌಡ ತಿಳಿಸಿದ್ದಾರೆ. ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ,ಮಳೆಯಿಂದ ಹಾನಿಗೊಳಗಾದ, ಪ್ರದೇಶಗಳ ಪರಿಶೀಲನೆ ನಡೆಸಿ, ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ರಾಜ್ಯದಲ್ಲಿ ಹಿಂಗಾರು ಅವಧಿಯಲ್ಲಿ, 56 ಸಾವಿರದ 993 ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿದ್ದು, 21 ಜನ ಪ್ರಾಣ ಕಳೆದುಕೊಂಡಿದ್ದಾರೆ ಎಂದರು.

<><><>

ಕಲಬುರಗಿಯಲ್ಲಿ ಗೋದಾಮು ನಿರ್ಮಾಣಕ್ಕೆ, ರಾಜ್ಯ ಬೀಜ ನಿಗಮ ಅನುಮೋದಿಸಿದೆ ಎಂದು, ಕೃಷಿ ಖಾತೆ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನ, ಹೆಬ್ಬಾಳದ ಪಶು ಭವನ ಸಭಾಂಗಣದಲ್ಲಿ, ಕರ್ನಾಟಕ ರಾಜ್ಯ ಬೀಜ ನಿಗಮದ ನಿರ್ದೇಶಕ ಮಂಡಳಿ ಸಭೆಯಲ್ಲಿ, ಸರ್ವ ಸದಸ್ಯರ ಸಭೆಯನ್ನು ಉದ್ದೇಶಿಸಿ ಅವರು, ಮಾತನಾಡಿದರು. ಈ ವ ರ್ 4 ಲಕ್ಷ ಕ್ವಿಂಟಾಲ್ ಉತ್ಪಾದನೆಯ ಗುರಿ ಹೊಂದಲಾಗಿದೆ. ಬೀಜ ನಿಗಮದ ವತಿಯಿಂದ ಎಲ್ಲ ಶೇರುದಾರರಿಗೆ ಶೇಕಡ 30ರ ್ಟ ಲಾಭಾಂಶ ನೀಡಲು ನಿರ್ಧರಿಸಲಾಗಿದೆ. 8 ಸಾವಿರದ 360 ಜನ ೇರುದಾರರಿಗೆ, 138 ಲಕ್ಷ ರೂಪಾಯಿ ದೊರೆಯಲಿದೆ ಎಂದರು. ಈ ಬಾರಿ ಉತ್ತಮ ಮಳೆಯಾಗಿದ್ದು, 82 ಲಕ್ಷ ಹೆಕ್ಟರ್ ಬಿತ್ತನೆಯಾಗಿದೆ. 40 ಲಕ್ಷ ಹೆಕ್ಟರ್ ಬೆಳೆಯನ್ನು ಕಟಾವು ಮಾಡಲಾಗಿದೆ. ಕಳೆದ 10 ದಿನಗಳಿಂದ ಸುರಿದ ತೀವ್ರ ಮಳೆಯಿಂದ, ಸುಮಾರು 1 ಲಕ್ಷ ಹೆಕ್ಟರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ವರದಿ ಬಂದ ಬಳಿಕ, ನಿಯಮಾನುಸಾರ ಪರಿಹಾರ ನೀಡಲಾಗುವುದು ಎಂದು, ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

<><><>

ಧಾರವಾಡ ಜಿಲ್ಲೆ, ಕಲಘಟಗಿ ತಾಲೂಕು, ಮುತ್ತಗಿ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ, 55 ಜನ ಅಸ್ವಸ್ಥ ಗೊಂಡಿದ್ದಾರೆ. ತೀವ್ರವಾಗಿ ಅಸ್ವಸ್ಥರಾಗಿದ್ದ 12 ಜನರನ್ನು, ಹುಬ್ಬಳ್ಳಿಯ ಕೆ.ಎಂ.ಸಿ.ಗೆ ದಾಖಲಿಸಿ, ಹೆಚ್ಚಿನ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಾಲೂಕು ವೈದ್ಯಾಧಿಕಾರಿ, ಡಾಕ್ಟರ್ ಬಸವರಾಜ ಬಾಸುರ ತಿಳಿಸಿದ್ದಾರೆ. ಚಿಕಿತ್ಸೆಗೆ ದಾಖಲಾಗಿದ್ದವರ ಪೈಕಿ, 7 ಜನ ಚೇತರಿಸಿಕೊಂಡಿದ್ದು, ತಾಲೂಕು ಆಸ್ಪತ್ರೆಯಲ್ಲಿ ಸದ್ಯ 48 ಜನರಿಗೆ ಚಿಕಿತ್ಸೆ ಮುಂದುವರೆದಿದೆ.

<><><>

ಸಂಬಂಧಿತ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಯನ್ನು ಅಮಾನತು ಮಾಡಲಾಗಿದೆ. ಜಿಲ್ಲಾಧಿಕಾರಿ ದಿವ್ಯಾ ಪ್ರಭು ಮುತ್ತಗಿ ಗ್ರಾಮಕ್ಕೆ ಭೇಟಿ ನೀಡಿ, ಪರಿಸ್ಥಿತಿ ಅವಲೋಕಿಸಿದ್ದಾರೆ. ಕೊಳವೆ ಬಾವಿಯಿಂದ ಕಲುಷಿತ ನೀರು ಪೂರೈಕೆಯಾಗಿದೆ ಎಂಬ ಪ್ರಾಥಮಿಕ ಮಾಹಿತಿ ದೊರೆತಿದೆ.

<><><>

ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಅವರು, ಅಸ್ವಸ್ಥಗೊಂಡವರಿಗೆ ತಲಾ ಎರಡು ಸಾವಿರ ರೂಪಾಯಿ ವಯಕ್ತಿಕ ಧನ ಸಹಾಯ ನೀಡಿದ್ದಾರೆ.

<><><>

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಭಾನುವಾರ ಬೆಳಗ್ಗೆ 11 ಗಂಟೆಗೆ, ದೇಶದ ಜನತೆಯೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ, 115ನೇ ಸಂಚಿಕೆಯಾಗಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಕಿತ್ತೂರು ರಾಣಿ ಚನ್ನಮ್ಮಾಜಿಯ ವಿಜಯೋತ್ಸವವನ್ನು, ಜನೋತ್ಸವವಾಗಿ ಸಂಭ್ರಮದಿಂದ ಆಚರಿಸಲಾಗಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ, ಪಾರಂಪರಿಕ ಸಂಸ್ಕೃತಿಗೆ ಒತ್ತು ನೀಡಬೇಕಿದೆ – ಜಗದೀಪ ಧನಕರ.
- ರಾಜ್ಯಾದ್ಯಂತ, ಅತಿ ವೃಷ್ಟಿಯ ಪರಿಣಾಮಗಳ ಬಗ್ಗೆ, ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ, ಇಂದು ಎಲ್ಲ ಜಿಲ್ಲಾಧಿಕಾರಿಗಳ ಸಭೆ – ಕೃ ್ಣ ಬೈರೇಗೌಡ.
- ಕಲಬುರಗಿಯಲ್ಲಿ ರಾಜ್ಯ ಬೀಜ ನಿಗಮದಿಂದ, ಗೊದಾಮು ನಿರ್ಮಾಣ – ಎನ್. ಚಲುವರಾಯಸ್ವಾಮಿ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>